ಕ್ಕೆ ತೆಗೆದುಕೊಳ್ಳಲ್ಪಡತಕ್ಕದ್ದು. ಗೇಣೀದಾರನು ಸದರೀ ಮರಗಳ ಪೈಕಿ ಯಾವದನ್ನಾದರೂ ಅಪೇಕ್ಷಿಸಿದರೆ, ಇದರಡೀ ಕಂಡ ಗೊತ್ತಾದ ಸೀನಿಯ ರೇಜ್ ಯಾನೆ ತೀರ್ವೇ ದರಗಳು ಯಾ ಡೆಪ್ಯುಟಿ ಕಮ್ಮಿಷನರವರ ಯುಕ್ತಾನುಸಾರ ಯಿನ್ನೂ ಕಮ್ಮಿಯಾದ ದರಗಳು ಪಾವತೀ ಮಾಡಲ್ಪಟ್ಟ ತರುವಾಯ ಕೊಡಲ್ಪಡತಕ್ಕದ್ದು:—

		ರೂ.
ಪ್ಯೂ	ದರಮರ ವಂದಕ್ಕೆ	15
ಹೆಸವಾ	ಡಿಟೋ	10
ಕರೀಮರ	ಡಿಟೋ	8
ನಂದಿ	ಡಿಟೋ	8
ಹೆಜನಿ	ಡಿಟೋ	6
ಯಬನಿ	ಡಿಟೋ	10
ಇತರ ತಮಾಂ ತರಹೆಯ ಮರಗಳೂ	ಡಿಟೋ	$3\frac{1}{2}$
ಬೊಂಬುಗಳು	ದರ 100ಕ್ಕೆ	10

V. ಗೇಣೀದಾರನು, ಇಲಾಚಿ ಮತ್ತು ಮೆಣಸು ವಿನಾ ಇತರ ಯಾವ ಫಾರೆಸ್ಟು ಹುಟ್ಟುವಳಿಗಾಗಲೀ ಹಕ್ಕುದಾರನಾಗಿರುವದಿಲ್ಲಾ, ಮತ್ತು ಫಾರೆಸ್ಟುಗಳು ವ ಪ್ಲಾಂಟೇಷ್ಣಗಳಲ್ಲಿರತಕ್ಕ ರಸ್ತೆಗಳನ್ನು ಆವರಣಿಸುವದಕ್ಕಾಗಲಿ, ನಿರೋಧಪಡಿಸುವದಕ್ಕಾಗಲಿ ಯಾ ಮತ್ಯಾವ ವಿಧವಾಗಿಯಾದರೂ ಆಟಂಕಪಡಿಸುವದಕ್ಕಾಗಲೀ ಗೇಣೀದಾರಗೆ ಸ್ವತಂತ್ರ ವಿರುವದಿಲ್ಲಾ; ಮತ್ತು ಗವರ್ಮೆಂಟಿನವರು ಅಂಥಾ ತಮಾಂ ಫಾರೆಸ್ಟು ವ ಪ್ಲಾಂಟೇಷ್ಣಗಳಲ್ಲಿಯ ಯಲ್ಲ ತರಹೆಯ ಪೂರ್ತಿಯಾದ ಹಕ್ಕುದಾರಿಗಳನ್ನೂ ತಾವೇ ಉಳಸಿಕೊಂಡಿರುತ್ತಾರೆ.

VI. ಈ ರೂಲ್ಸ್ ಅನುಸರಿಸಿ ಪಡೆದ ಇಲಾಚಿ ವ ಮೆಣಸಿನ ಗೇಣಿಯು ಗೇಣೀದಾರನ ಯಿಷ್ಟಾನುಸಾರ ವಿಕ್ರಯಿಸಲ್ಪಡಬಹುದು ಯಾ ಅನ್ಯಥಾ ಪರಭಾರೇ ಮಾಡಲ್ಪಡಬಹುದು, ಪರಂತು ಅಂಥಾ ಪರಭಾರೆಯ ವರ್ತಮಾನವು ಡೆಪ್ಯುಟಿ ಕಮ್ಮಿಷನರವರಿಗೆ ಅವರ ಆಫೀಸಿನಲ್ಲಿ ದಾಖಲೆ ಬಗ್ಗಾಗಿ ಕೊಡಲ್ಪಡತಕ್ಕದ್ದು, ಮತ್ತು ಗೇಣಿಯ ಪರಭಾರೆಯು ರೆಜಿಸ್ಟ್ರೇಷ್ಣ ಆಕ್ಟಿನ ನಿಯಮಗಳನ್ನನುಸರಿಸಿ ಕ್ರಮವಾಗಿ ರಿಜಿಸ್ಟ್ರು ಮಾಡಲ್ಪಡತಕ್ಕದ್ದು.

ಯಲ್. ರಿಕ್ಕೆಟ್ಸ್,
ಫಾರೆಸ್ಟ್ ಇನ್‌ಸ್ಪೆಕ್ಟರ್ ಜನರಲ್.

ಅಂಚೇ ಇಲಾಖಾ.

ನಂಬರ್ 167—92. ತಾರೀಖು 28ನೇ ಜುಲೈ 1887.

ಇದರಿಂದ ಸಕಲಜನಗಳಿಗೂ ತಿಳಿಯುವ ಬಗ್ಗೆ ಪ್ರಕಟಿಸಲ್ಪಡುವದೇನಂದರೆ, ಮೈಸೂರ ಶ್ರೀಮನ್ ಮಹಾರಾಜ ರಾಜಾನಾಹೇಬ್ ಬಹದೂರವರ ದಿವಾನರವರ ಅಪ್ಪಣೆ ಅನುಸರಿಸಿ ಈ ಕೆಳಗೆ ಕಂಡ ಸ್ಥಳಗಳೊಳಗೆ ಹೋಬಳಿ ಅಂಚೇ ಆಫೀಸ್‌ಗಳು ಸ್ಥಾಪಿಸಲ್ಪಟ್ಟು ಯಿರುತ್ತೆ:—

ತಾಲ್ಲೂಕು.	ಅಂಚೇ ಆಫೀಸ್ ಸ್ಥಾಪಿಸಲ್ಪಟ್ಟ ಸ್ಥಳದ ಹೆಸರು.
ನೆಲಮಂಗಲ ..	ಯಲೆಕ್ಯಾತನಹಳ್ಳಿ
ಮಾಗಡಿ ..	ತಿಪ್ಪಸಂದ್ರ

ತಾಲ್ಲೂಕು.	ಅಂಚೇ ಆಫೀಸ್ ಸ್ಥಾಪಿಸಲ್ಪಟ್ಟ ಸ್ಥಳದ ಹೆಸರು.
ಮದ್ದಗಿರಿ ...	ಹೊಳವನಹಳ್ಳಿ
ಮಂಜರಾಬಾದ್ ..	ವುದೇವಾರ
ಡಿಟೋ ..	ಮೂರ್ನಹಳ್ಳಿ
ತುಮಕೂರು ...	ಜೆಳಧರ

ಬಿ. ಮರಿದೇವಯ್ಯ,
ಅಂಚೇ ಬಕ್ಷಿ.

ಮೈಸೂರು ಡಿಸ್ಟ್ರಿಕ್ಟ್.

ನಂ. 8. ತಾರೀಖು 1ನೇ ಆಗಸ್ಟು 1887.

ಚಾಮರಾಜನಗರ ಸಬ್ ರಿಜಿಸ್ಟ್ರಾರ್ ಆಫೀಸಿನಲ್ಲಿ ಇದರ ಕೆಳಗೆ ನಮೂದಿಸಿರುವ ದಸ್ತೈವಜನ್ನು ಕ್ರಮವಾದ ವಾರಸ್‌ದಾರ್‌ರಾಗಲಿ, ಅಥವಾ ಅಧಿಕಾರ ಹೊಂದಿದ ಮುತಾಲೀಕನಾಗಲಿ ಈ ತಾರೀಖು ಲಾಗಾಯತು ಒಂದು ತಿಂಗಳೊಳಗಾಗಿ ಹಾಜರಾಗಿ ವಾಪಸ್ ಪಡಿಯಬೇಕು, ತಪ್ಪಿದಲ್ಲಿ 1877ನೇ ಇಸವಿ 3ನೇ ನಂಬರ್ ರಿಜಿಸ್ಟ್ರೇಷ್ಯನ್ ಆಕ್ಟು 85ನೇ ಸೆಕ್ಷನ್ ಮೇರಿಗೆ ನಾಶಪಡಿಸಲ್ಪಡುತ್ತೆ.

ನಂಬರ್.	ದಸ್ತೈವಜು ಬರದು ಕೊಟ್ಟವರ ಹೆಸರು ಮತ್ತು ವಾಸಸ್ಥಳ.	ಬರಸಿಕೊಂಡವರ ಹೆಸರು ಮತ್ತು ವಾಸಸ್ಥಳ.	ರಿಜಿಸ್ಟ್ರಿಗೆ ಹಾಜರಾಗಿ ಸಹಿ ಮಾಡಿದ ತಾರೀಖು.	ರಿಜಿಸ್ಟ್ರಿ ಸಹಿ ಮಾಡಿದ ತಾರೀಖು.	ದಸ್ತಾವೇಜಿನ ಸ್ವಭಾವ ಮತ್ತು ಕಿಮ್ಮತ್ತು.
236 ———— 1885—86	ಚಾಮರಾಜನಗರ ತಾಲ್ಲೂಕು ನಾಗನಹಳ್ಳಿ ಗ್ರಾಮದಲ್ಲಿರುವ ರಂಗಪ್ಪನ ಮಗ ಪುಟ್ಟನಪುರದ ಶ್ಯಾನಭೋಗ ಅನಂತಪ್ಪ	ಚಾಮರಾಜನಗರ ತಾಲ್ಲೂಕು ನಾಗನಹಳ್ಳಿ ಗ್ರಾಮದಲ್ಲಿರುವ ಮುಸಲಮಾನರ ಅಬ್ದುಲ್ ನಬೀಸಾಬಿ ಮಗ ಖಾಶಿಂಸಾಬಿ	28—7—85	29—7—85	(70) ರೂಪಾಯಿನ ಭೂಸ್ಥಿತಿ ಕ್ರಯಪತ್ರ.

ಟಿ. ಆನಂದರಾವ್,
ರಿಜಿಸ್ಟ್ರಾರ್.

ಮೈಸೂರು ಡಿಸ್ಟ್ರಿಕ್ಟ್ ಜಡ್ಜ್‌ರ ಕೋರ್ಟಿನಲ್ಲಿ.

1887ನೇ ಇಸವಿ ಅರ್ಜೀ ನಂಬರ್ 331.

ಮೃತಪಟ್ಟ ಸುಬ್ಬರಾಯರ ಆಸ್ತೀ ವಿಷಯದಲ್ಲಿ—

ಅರ್ಜೀದಾರ ಸುಬ್ಬರಾಮಯ್ಯ ಮೈನರ್, ಗಾರ್ಡಿಯರ್ ಕೃಷ್ಣಪ್ಪನವರು, ಮೃತಪಟ್ಟ ಸದರೀ ಸುಬ್ಬರಾಯರಿಗೆ ಮಗ ಆಗಬೇಕೆಂಬ ಹಕ್ಕುದಾರೀ ಮೇಲೆ ಮೈಸೂರು ಲಷ್ಕರ್ ಮೊಹಲಾ ಸ್ಥಳದ ಸದರೀ ಕೃಷ್ಣಪ್ಪನವರು ಸದರೀ ವಾಸಸ್ಥರಾಗಿ ಮೃತಪಟ್ಟ ಸುಬ್ಬರಾಯರ ಜಿಂದಗಿ ಭಗ್ಯಾಗಿ ಬರತಕ್ಕ 150 ರೂಪಾಯಿಗಳ ಸಾಲವನ್ನು ವಸೂಲ್ ಮಾಡುವದಕ್ಕೆ 1860ನೇ ಇಸವಿ 27ನೇ ಆಕ್ಟು ಮೇರಿಗೆ ಸರಟಿಫಿಕೇಟ್ ಬಗ್ಯೆ ಈ ಕೋರ್ಟಿಗೆ ಖಾಯಿಷ್‌ಮಾಡಿರುತ್ತಾರೆ.

ಸದರೀ ದರಖಾಸ್ತುದಾರರಾದ ಕೃಷ್ಣಪ್ಪನವರ ಅರ್ಜೀಯನ್ನು 1887ನೇ ಇಸವಿ ಆಗಸ್ಟು ತಿಂಗಳು ತಾರೀಖು 19ರಲ್ಲು ಕೇಳಿ ಸರಟಿಫಿಕೇಟ್ ಪಡಿಯತಕ್ಕ ಬಾಧ್ಯತೆಯನ್ನ ವಿಮರ್ಶೆ ಮಾಡಲ್ಪಡುತ್ತೆ. ಆ ಕಾಲದಲ್ಲಿ ಸದರೀ ಮೃತಪಟ್ಟ ಸುಬ್ಬರಾಯರ ಆಸ್ತಿಗೆ ಹಕ್ಕುದಾರರಾದ ವಿಸಿಸ್ಟರೂ ಈ ಕೋರ್ಟಿನಲ್ಲಿ ಹಾಜರ್ ಇರಬೇಕೆಂದು ಇದರಿಂದ ತಿಳಿಯಪಡಿಸಿ ಇದೆ.

1887ನೇ ಇಸವಿ ಅರ್ಜೀ ನಂಬರ್ 347.

ಮೃತಪಟ್ಟ ಆಸ್ವತ್ಕೇಲಿಂಗಯ್ಯನವರ ಆಸ್ತೀ ವಿಷಯದಲ್ಲಿ—

ಅರ್ಜೀದಾರ ನಾಗಯ್ಯನು, ಮೃತಪಟ್ಟ ಸದರೀ ಆಸ್ವತ್ಕೇಲಿಂಗಯ್ಯನವರಿಗೆ ಮಗ ಆಗಬೇಕೆಂಬ ಹಕ್ಕುದಾರೀ ಮೇಲೆ ಮೈಸೂರು ದೇವರಾಜ ಮೊಹಲಾ ಸ್ಥಳದ ಸದರೀ ನಾಗಯ್ಯನು ಸದರೀ ವಾಸಸ್ಥರಾಗಿ ಮೃತಪಟ್ಟ ಆಸ್ವತ್ಕೇಲಿಂಗಯ್ಯನವರ ಜಿಂದಗಿ ಬಗ್ಯಾಗಿ ಬರತಕ್ಕ 500 ರೂಪಾಯಿಗಳ ಸಾಲವನ್ನು ವಸೂಲ್ ಮಾಡುವದಕ್ಕೆ 1860ನೇ ಇಸವಿ 27ನೇ ಆಕ್ಟು ಮೇರಿಗೆ ಸರಟಿಫಿಕೇಟ್ ಬಗ್ಯೆ ಈ ಕೋರ್ಟಿಗೆ ಖಾಯಿಷ್ ಮಾಡಿರುತ್ತಾನೆ.

ಸದರೀ ದರಖಾಸ್ತುದಾರನಾದ ನಾಗಯ್ಯನ ಅರ್ಜೀಯನ್ನು 1887ನೇ ಇಸವಿ ಆಗಸ್ಟು ತಿಂಗಳು ತಾರೀಖು 29ರಲ್ಲು ಕೇಳಿ ಸರ್ಟಿಫಿಕೇಟ್ ಪಡಿಯತಕ್ಕ ಬಾಧ್ಯತೆಯನ್ನು ವಿಮರ್ಶೆ ಮಾಡಲ್ಪಡುತ್ತೆ. ಆ ಕಾಲದಲ್ಲಿ ಸದರೀ ಮೃತಪಟ್ಟ ಆಸ್ವತ್ಕೇಲಿಂಗಯ್ಯನವರ ಆಸ್ತಿಗೆ ಹಕ್ಕುದಾರರಾದವಿಸಿಸ್ಟ್ರರೂ ಈ ಕೋರ್ಟಿನಲ್ಲಿ ಹಾಜರ್ ಇರಬೇಕೆಂದು ಇದರಿಂದ ತಿಳಿಯಪಡಿಸಿ ಇದೆ.

1887ನೇ ಇಸವಿ ಜುಲೈ ತಿಂಗಳು 20ನೇ ತಾರೀಖಿನಲ್ಲಿ ಕೋರ್ಟು ಮೊಹರ್‌ನಿಸಿ ನಮ್ಮ ದಸ್ತಖತ್ತೊಡನೆ ಕೊಡೋಣಾಗಿಸ್ಥೆ.